ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿ025521**

**ಕಂಪನಿ ಅಧಿಕೃತ ಕಛೇರಿ:** ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009.

**ಸಂಖ್ಯೆ:ಕವಿಪ್ರನಿನಿ/ಬಿ೭ಎ/7202/88-89** **ದಿನಾಂಕ:** 25 FEB 2020

## ಸುತ್ತೋಲೆ

ತ್ರಿ.ನಿಸಿ (ಮತ್ತೆ-1) 26/02/20

**ವಿಷಯ:** ಸಮವಸ್ತ್ರವನ್ನು ಮತ್ತು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸಲು ಸೂಚಿಸಿದ ಬಗ್ಗೆ.

---

ಕಾವೇರಿ ಭವನದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವಿವಿಧ ಕಚೇರಿಗಳಲ್ಲಿ/ ಶಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು ಸಮವಸ್ತ್ರವನ್ನು ಪಡೆದಿರುವ ಎಲ್ಲಾ ನೌಕರರು ಕಛೇರಿಯ ಕೆಲಸದ ವೇಳೆಯಲ್ಲಿ ಕಡ್ಡಾಯವಾಗಿ ಸಮವಸ್ತ್ರವನ್ನು ಧರಿಸುವ ವಿಷಯದಲ್ಲಿ ಸುತ್ತೋಲೆಗಳ ಮೂಲಕ ಹಲವು ಬಾರಿ ಸೂಚನೆಗಳನ್ನು ನೀಡಿರುವುದರ ಜೊತೆಗೆ, ಮೌಖಿಕವಾಗಿ ಮೇಲಾಧಿಕಾರಿಗಳು ಸೂಚನೆಗಳನ್ನು ನೀಡಿದ್ದಾಗ್ಯೂ ಸಹಾ, ನೌಕರರು ಸಮವಸ್ತ್ರವನ್ನು ಧರಿಸದೇ ಕಛೇರಿಯ ಕೆಲಸವನ್ನು ನಿರ್ವಹಿಸುತ್ತಿರುವುದನ್ನು ಮತ್ತು ನಿಗಮದಿಂದ ಗುರುತಿನ ಚೀಟಿಯನ್ನು (Identity Card) ಪಡೆದಿರುವ ಅಧಿಕಾರಿಗಳು ಮತ್ತು ನೌಕರರು ಕಛೇರಿಯ ಕೆಲಸದ ವೇಳೆಯಲ್ಲಿ ಗುರುತಿನ ಚೀಟಿಯನ್ನು ಧರಿಸದೇ ಕಾರ್ಯನಿರ್ವಹಿಸುತ್ತಿರುವುದನ್ನು ನಿಗಮವು ಬಹಳ ಗಂಭೀರವಾಗಿ ಪರಿಗಣಿಸಿದೆ.

ಆದ್ದರಿಂದ, ಕಾವೇರಿ ಭವನದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವಿವಿಧ ಕಚೇರಿಗಳ/ಶಾಖೆಗಳ ಮುಖ್ಯಸ್ಥರು ತಮ್ಮ ಕಛೇರಿಯಲ್ಲಿ ಮತ್ತು ಅಧೀನದಲ್ಲಿನ ಶಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಧಫೇದಾರ್‌ಗಳು, ದಫ್ತರಿಗಳು, ಕಛೇರಿ ಪರಿಚಾರಕರು, ಕಾವಲುಗಾರರು, ಚಾಲಕರು, ಲಿಫ್ಟ್ ಅಟೆಂಡೆಂಟ್‌ಗಳು ಕಛೇರಿಯ ಕೆಲಸದ ವೇಳೆಯಲ್ಲಿ ಮತ್ತು ನಿಗಮದ ಕೆಲಸಗಳನ್ನು ನಿರ್ವಹಿಸುವ ಸಂಧರ್ಭಗಳಲ್ಲಿ ತಪ್ಪದೇ ಸಮವಸ್ತ್ರವನ್ನು ಧರಿಸುತ್ತಿರುವುದನ್ನು ಮತ್ತು ಅಧಿಕಾರಿಗಳು ಹಾಗೂ ನೌಕರರು ಕಛೇರಿಯ ಕೆಲಸದ ವೇಳೆಯಲ್ಲಿ ಗುರುತಿನ ಚೀಟಿಯನ್ನು ಧರಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದು ಮತ್ತು ಸಮವಸ್ತ್ರಗಳನ್ನು ಹಾಗೂ ಗುರುತಿನ ಚೀಟಿಗಳನ್ನು ಪಡೆಯದಿರುವ ಸಂಬಂಧಿಸಿದ ಸಿಬ್ಬಂದಿಗೆ ತಕ್ಷಣವೇ ಒದಗಿಸಲು ಅವಶ್ಯಕವಿರುವ ಕ್ರಮಗಳನ್ನು ಜರುಗಿಸತಕ್ಕದ್ದು.

ಸಮವಸ್ತ್ರವನ್ನು ಮತ್ತು ಗುರುತಿನ ಚೀಟಿಯನ್ನು ಧರಿಸದೇ ಕಛೇರಿಯ ಕೆಲಸಕ್ಕೆ ಹಾಜರಾಗುವ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಮೊದಲು ಮೌಖಿಕವಾಗಿ ಎಚ್ಚರಿಕೆಯನ್ನು ನೀಡಿ, ಆದರೂ ಸಹಾ ಸೂಚನೆಗಳನ್ನು ಉಲ್ಲಂಘಿಸಿ ಸಮವಸ್ತ್ರಗಳನ್ನು ಮತ್ತು ಗುರುತಿನ ಚೀಟಿಯನ್ನು ಧರಿಸದೇ ಕಛೇರಿ ಕೆಲಸಕ್ಕೆ ಹಾಜರಾಗುವ ಅಧಿಕಾರಿಗಳ ಮತ್ತು ನೌಕರರ ವಿರುದ್ಧ ನಿಗಮದ ನಿಯಮಾನುಸಾರ ಸೂಕ್ತ ಶಿಸ್ತು ಕ್ರಮವನ್ನು ತಪ್ಪದೇ ಜರುಗಿಸಲು ಸೂಚಿಸಿದೆ. ತಪ್ಪಿದಲ್ಲಿ, ಸಂಬಂಧಿಸಿದ ಮೇಲಾಧಿಕಾರಿಗಳನ್ನು ಜವಾಬ್ದಾರಿಯುತರನ್ನಾಗಿ ಮಾಡಲಾಗುವುದು.

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.)
ಕವಿಪ್ರನಿನಿ.

<u>ಪ್ರತಿಗಳು ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ:</u>

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.)/ ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
4. <u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ; www.kptcl.com-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>
5. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
7. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
8. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.